ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ.

**ಸಿ.ಸಿ. ಸಂಃ 7/2019**

| | | |
|---|---|---|
| ಸಾಕ್ಷಿಯ ಹೆಸರುಃ | ಶಿವ | ಫ್ರಾಸಾಃಃ 2 |
| ತಂದೆಯ ಹೆಸರುಃ | ಲಕ್ಷ್ಮಯ್ಯ | ಚಾಸಾಃಃ 5 |
| ವಯಸ್ಸುಃ | 45 ವರ್ಷ | ಪ್ರಮಾಣೀಕರಿಸಿದ<br>ದಿಃ 12.02.2026 |
| ಉದ್ಯೋಗಃ | ವ್ಯಾಪಾರ | |
| ವಾಸ ಸ್ಥಳಃ | ಪಿರಿಯಾಪಟ್ಟಣ | |

ಮುಖ್ಯ ವಿಚಾರಣೆಃ ಸಸಅ ರಿಂದಃ

1. ಸಾಕ್ಷಿಯು ಮಹಜರ್ ನಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುಸಿರುತ್ತಾರೆ. ಮಹಜರನ್ನು ನಿಪಿ - 2 ಎಂದು, ಸಾಕ್ಷಿಯ ಸಹಿಯನ್ನು ನಿಪಿ - 2(ಎ) ಎಂದು ಗುರುತಿಲಾಯಿತು. ನಿಪಿ - 2 ಕ್ಕೆ ನಾನು ಈಗ್ಗೆ 8 ವರ್ಷದ ಹಿಂದೆ ಗೋಣಿಕೊಪ್ಪ ರಸ್ತೆಯಲ್ಲಿ ಮಾಡಿರುತ್ತೇನೆ. ರಾಯಮ್ಮ ನವರಿಗೆ ಅಪಘಾತ ವಿಚಾರವಾಗಿ ಪೊಲೀಸರು ಮಹಜರ್ ಮಾಡಲು ಬಂದಿದ್ದಾಗ ನನ್ನ ಸಹಿ ಪಡೆದಿರುತ್ತಾರೆ. ಆಗ ಹರೀಶ ಹಾಗೂ ಯೋಗೇಶ ರವರು ಸ್ಥಳದಲ್ಲಿ ಇದ್ದರು.

ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ

1. ರಾಯಮ್ಮ ನನ್ನ ಚಿಕ್ಕಮ್ಮ ಆಗಬೇಕು.

2. ಪೊಲೀಸರು ಮಹಜರಿಗೆ ಬರುವಂತೆ ನನಗೆ ಲಿಖಿತವಾಗಿ ನೊಟೀಸು ನೀಡಿಲ್ಲ.

3. ಮಹಜರನ್ನು ಬರೆದವರ ಹೆಸರು ನನಗೆ ಗೊತ್ತಿಲ್ಲ. ಮಹಜರ್ ನಲ್ಲಿ ಬರೆದ ವಿಚಾರಗಳು ನನಗೆ ಗೊತ್ತಿಲ್ಲ.

4. ಮಹಜರ್ ಮಾಡಿದ ಜಾಗದ ಚಕ್ಕುಬಂದಿ ಗೊತ್ತಾ ಎಂದರೆ, ಗೊತ್ತಿಲ್ಲ.

5. ಮಹಜರಿಗೆ ಮೊದಲು ಹರೀಶ ರವರು ಸಹಿ ಮಾಡಿರುತ್ತಾರೆ.

6. ಪೊಲೀಸರು ಯಾವುದೇ ಸ್ಥಳಕ್ಕೆ ಬಂದಿಲ್ಲ ಹಾಗೂ ನಿಮ್ಮ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ ಎಂದರೆ ಸರಿಯಲ್ಲ. ನೀವು ನಿಪಿ - 2 ಕ್ಕೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿದ್ದೀರಾ ಎಂದರೆ ಸರಿಯಲ್ಲ.

7. ರಾಯಮ್ಮ ರವರ ಕುಟುಂಬದವರಿಗೆ ವಿಮಾ ಪರಿಹಾರ ಹಣ ಪಡೆಯಲು ಅನುಕೂಲವಾಗಲಿ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು
ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ
ಪಿರಿಯಾಪಟ್ಟಣ